# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಡಾ.ತಳವಾರ್ ಸಾಬಣ್ಣ (ನಾಮ ನಿರ್ದೇಶನ ಹೊಂದಿದವರು)
ಚುಕ್ಕೆ ರಹಿತ ಪ್ರಶ್ನೆಸಂಖ್ಯೆ : 363
ಉತ್ತರ ದಿನಾಂಕ : 16.02.2023
ಉತ್ತರಿಸುವವರು : ಮಾನ್ಯ ಮುಖ್ಯ ಮಂತ್ರಿಗಳು

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಗ್ರಾಮೀಣ ಪ್ರದೇಶದ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಜಲ ಜೀವನ್ ಮಿಷನ್ ಯೋಜನೆಯು ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಂಪೂರ್ಣ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಗ್ರಾಮೀಣ ಪ್ರದೇಶದ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಜಲ ಜೀವನ ಮಿಷನ್ ಯೋಜನೆಯು ಕಲ್ಯಾಣ ಕರ್ನಾಟಕ ಭಾಗದ ಬೀದರ್, ಬಳ್ಳಾರಿ, ಕೊಪ್ಪಳ, ರಾಯಚೂರು, ವಿಜಯನಗರ, ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸುತ್ತಿದ್ದು, ಯೋಜನೆ ವಿಫಲವಾಗಿರುವ ಬಗ್ಗೆ ಈವರೆಗೂ ವರದಿ ಸ್ವೀಕೃತವಾಗಿರುವುದಿಲ್ಲ. |
| ಆ) | ಬಂದಿದ್ದಲ್ಲಿ, ಅಪೂರ್ಣ ಕಾಮಗಾರಿಯ ವೆಚ್ಚ ಪಾವತಿಯಾಗಿರುವ ಬಗ್ಗೆ ತನಿಖೆ ಮಾಡಲಾಗಿದೆಯೇ; | ಅನ್ವಯಿಸುವುದಿಲ್ಲ. |
| ಇ) | ಹಳ್ಳಿಗಳಲ್ಲಿ ರಸ್ತೆ ನಿರ್ಮಾಣ ಹಾಗೂ ನೀರಿನ ಸೌಲಭ್ಯಕ್ಕಾಗಿ ರಸ್ತೆಗಳನ್ನು 4-6 ಇಂಚು ಕೊರೆದು ಕಾಮಗಾರಿಗಳನ್ನು ಅಪೂರ್ಣಗೊಳಿಸಿರುವುದರಿಂದ ಸಾರ್ವಜನಿಕರು ಹಾಗೂ ಜಾನುವಾರುಗಳ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಜಲ ಜೀವನ ಮಿಷನ್ ಯೋಜನೆಯಡಿ ಕುಡಿಯುವ ನೀರು ಸರಬರಾಜು ಯೋಜನೆಗಳ ಕಾಮಗಾರಿಗಳಲ್ಲಿ ಪೈಪ್‌ಗಳನ್ನು ಅಳವಡಿಸಿ ಎಲ್ಲಾ ಮನೆಗಳಿಗೆ ಕಾರ್ಯಾತ್ಮಕ ನಳ ನೀರು ಸಂಪರ್ಕ ಕಲ್ಪಿಸಿ ನೀರು ಸರಬರಾಜನ್ನು ಪರೀಕ್ಷಿಸಿದ ನಂತರ ರಸ್ತೆಗೆ ಕಾಂಕ್ರೀಟ್ ಅಳವಡಿಸಿ ಮೊದಲ ಸ್ಥಿತಿಗೆ ತರಲು ಅಂದಾಜಿನಲ್ಲಿ ಅನುವುಮಾಡಲಾಗಿದೆ. ಅದರಂತೆ, ಸಿಸಿ ರಸ್ತೆಗಳನ್ನು ಅಗೆದಿರುವ ಕಡೆ ಪುನಃ ಕಾಂಕ್ರೀಟ್ ಅಳವಡಿಸಿ ಸರಿಪಡಿಸಲು ಕ್ರಮವಹಿಸಲಾಗುತ್ತಿದೆ. |
| (ಈ) | ಬಂದಿದ್ದಲ್ಲಿ, ಅಪೂರ್ಣ ಕಾಮಗಾರಿ ಬಗ್ಗೆ ತನಿಖೆ ನಡೆಸಲು ಮತ್ತು ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಸರ್ಕಾರ ಕ್ರಮಕೈಗೊಳ್ಳುವುದೇ? (ವಿವರ ನೀಡುವುದು) | ಕಾಮಗಾರಿಗಳು ಅನುಷ್ಠಾನಗೊಂಡ ನಂತರ 3ನೇ ವ್ಯಕ್ತಿ ಪರಿವೀಕ್ಷಣಾ ತಂಡದವರಿಂದ ಪರಿವೀಕ್ಷಣೆಗೊಳಪಡಿಸಿ ವರದಿ ಪಡೆದು ನಂತರ ಕಾಮಗಾರಿಯನ್ನು ಗ್ರಾಮ ಪಂಚಾಯತಿಗೆ ಹಸ್ತಾಂತರಗೊಳಿಸಿ, ಹರ್ ಘರ್ ಜಲ್ ಘೋಷಣೆ ಮಾಡುವ ಕ್ರಮ ಜಾರಿಯಲ್ಲಿರುತ್ತದೆ ಹಾಗೂ ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ರಾಜ್ಯ ಗುಣಮಟ್ಟ ಮಾನಿಟರ್ (SQM)ರವರನ್ನು ನೀಯೋಜಿಸಿ ಪರಿವೀಕ್ಷಣೆ ಕೈಗೊಳ್ಳುತ್ತಿದ್ದು, ಒಟ್ಟಾರೆ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಕ್ರಮವಹಿಸಲಾಗಿದೆ. |

ಸಂ:ಗ್ರಾಕುನೀ&ನೈಇ/17/ಅಧೀಕ್ಷಕರು-1/2023

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ